ಮತ್ತು ಉಳಿದವುಗಳನ್ನು ಜಿಲ್ಲಾಧಿಕಾರಿಗಳ ಮೂಲಕ ನಿರ್ಮಿಸಲು ಸರ್ಕಾರ ನಿರ್ಧರಿಸಿದೆ.

ಬೆಂಗಳೂರು ಮಹಾನಗರ ಪಾಲಿಕೆ ಪರಿಸ್ಥಿತಿ ಕುರಿತು.

1076-ಶ್ರೀ ಎ.ಕೆ. ಅನಂತಕೃಷ್ಣ (ಶಿವಾಜಿನಗರ) : ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಬೆಂಗಳೂರು ಮಹಾನಗರ ಪಾಲಿಕೆಯು ಆರ್ಥಿಕ ಸಂದಿಗ್ಧ ಪರಿಸ್ಥಿತಿಯನ್ನು ಅನುಭವಿಸುತ್ತಿರುವುದು ಹಾಗೂ ಅದರಿಂದಾಗಿ ಸಾಧಾರಣ ನಿರ್ವಹಣೆ ಮತ್ತು ಅಭಿವೃದ್ಧಿ ಕಾರ್ಯಕ್ರಮಗಳನ್ನು ಸಹ ತೆಗೆದುಕೊಳ್ಳಲಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ನಗರಪಾಲಿಕೆಯ ಆರ್ಥಿಕ ಪರಿಸ್ಥಿತಿಯನ್ನು ಉತ್ತಮಗೊಳಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮವೇನು?*

ಶ್ರೀ ಚೌಡರೆಡ್ಡಿ (ನಗರಾಭಿವೃದ್ಧಿ ಸಚಿವರು)

ಅ) ಇಲ್ಲ.

ಆ) ಮೇಲಿನ ಪ್ರಶ್ನೆಗೆ ನೀಡಿರುವ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಬೆಳಗಾಂ ಜಿಲ್ಲೆ ಬೈಲಹೊಂಗಲ ತಾಲ್ಲೂಕು ಪೈಕಿ ತೋರ್ಕರಸಿಹಳ್ಳಿ ಗ್ರಾಮದಲ್ಲಿ ಬಿ.ಸಿ.ಎಂ. ಹಾಸ್ಟೆಲ್ ಮಂಜೂರು.

1081-ಶ್ರೀ ಶಿವಾನಂದ ಹೆಚ್. ಕೌಜಲಗಿ (ಬೈಲಹೊಂಗಲ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಬೆಳಗಾಂ ಜಿಲ್ಲೆ ಬೈಲಹೊಂಗಲ ವಿದ್ಯಾರ್ಥಿಗಳಿಗೆ ತೋರ್ಕರಸಿಹಳ್ಳಿ ಗ್ರಾಮದಲ್ಲಿ ಸರ್ಕಾರಿ ಪ್ರೌಢ ಶಾಲೆ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಈ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿಗಳಿಗೆ ಹಾಸ್ಟೆಲ್ ಸೌಲಭ್ಯ ಇಲ್ಲದೇ ತೊಂದರೆಯಾಗುತ್ತಿರುವ ಸಂಗತಿ ಸರ್ಕಾರದವರ ಗಮನಕ್ಕೆ ಬಂದಿದೆಯೆ.*

ಇ) *ಹಾಗಿದ್ದಲ್ಲಿ, ಅಲ್ಲಿ ಹಿಂದುಳಿದ ವರ್ಗಗಳ ಪೈಕಿ ಪ್ರಾರಂಭಿಸಲು ಸರ್ಕಾರದವರು ಕ್ರಮ ಕೈಗೊಳ್ಳುವರೆ?*

ಶ್ರೀ ಧರ್ಮಸಿಂಗ್ (ಸಮಾಜ ಕಲ್ಯಾಣ ಸಚಿವರು)

ಅ) ಹೌದು.

ಆ) ಇಲ್ಲ.

ಇ) ಅದ ಉತ್ತರದಿಂದ ಉದ್ಭವಿಸುವುದಿಲ್ಲ.

ಹೋಟೆಲ್ ಬಾಲ ಕಾರ್ಮಿಕರಿಗೆ ಕೆಲಸಕ್ಕೆ ತೆಗೆದುಕೊಳ್ಳುತ್ತಿರುವ ಬಗ್ಗೆ.

1082-ಶ್ರೀ ಶಿವಾನಂದ ಹೆಚ್. ಕೌಜಲಗಿ (ಬೈಲಹೊಂಗಲ) : ಮಾನ್ಯ ಕಾರ್ಮಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಹೋಟೆಲ್‌ಗಳಲ್ಲಿ ಉಪಹಾರ ಗೃಹಗಳಲ್ಲಿ ಬಾಲಕಾರ್ಮಿಕರನ್ನು ಕೆಲಸಕ್ಕೆ ನೇಮಕ ಮಾಡಿಕೊಂಡಿರುವ ಸಂಗತಿ ಸರ್ಕಾರದವರ ಗಮನಕ್ಕೆ ಬಂದಿದೆಯೇ ?

ಆ) ಬಾಲ ಕಾರ್ಮಿಕರಿಗೆ ಹೋಟೆಲ್‌ಗಳಲ್ಲಿ ಕೆಲಸ ಮಾಡಿಕೊಳ್ಳಬಾರದು ಎಂಬ ನಿಯಮವಿದ್ದರೂ ಕೂಡ ಕೆಲಸಕ್ಕೆ ತೆಗೆದುಕೊಳ್ಳುತ್ತಿರುವ ಸಂಗತಿ ಸರ್ಕಾರದವರ ಗಮನಕ್ಕೆ ಬಂದಿದೆಯೇ ?

ಇ) ಹಾಗಿದ್ದಲ್ಲಿ ಎಷ್ಟು ಹೋಟೆಲ್‌ಗಳ ಮಾಲೀಕರುಗಳ ಮೇಲೆ ಸರ್ಕಾರವು ಕ್ರಮ ಕೈಗೊಂಡಿದೆ ?

ಶ್ರೀ ಬ್ಲೇಸಿಯಸ್ ಎಂ. ಡಿಸೋಜ (ಕಾರ್ಮಿಕ ಸಚಿವರು):

ಅ) ಕರ್ನಾಟಕ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ಕಾಯ್ದೆ. 1961ರನ್ವಯ 12 ವರ್ಷಕ್ಕಿಂತ ಮೇಲ್ಪಟ್ಟ ಯಾವುದೇ ಬಾಲ ಕಾರ್ಮಿಕನನ್ನು ಕಾನೂನಿನಲ್ಲಿಯ ನಿರ್ಬಂಧನೆಗಳಿಗೆ ಒಳಪಟ್ಟು ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳಲ್ಲಿ ಕೆಲಸಕ್ಕೆ ನೇಮಿಸಬಹುದಾಗಿದೆ.

ಆ) ಹೌದು.

ಇ) ಅಂತಹ ದೂರುಗಳು ಬಂದಾಗ ತಕ್ಷಣ ಅಗತ್ಯವಾದ ಕ್ರಮವನ್ನು ತೆಗೆದುಕೊಳ್ಳಲಾಗುತ್ತಿದೆ. ಜೊತೆಗೆ ಇಲಾಖಾ ಅಧಿಕಾರಿಗಳು ಅನಿರೀಕ್ಷಿತ ತಪಾಸಣೆಯನ್ನು ತಪ್ಪದೆ ಮಾಡಿ ಕಾರ್ಮಿಕ ನಿಯಮದ ಮೇರೆಗೆ ಕ್ರಮವನ್ನು ತೆಗೆದುಕೊಳ್ಳುತ್ತಾರೆ. ಹಲವು ವರ್ಷಗಳಿಂದೀಚೆಗೆ ಅಂತಹ 4216 ಚಾರಿ ತಪಾಸಣೆಯನ್ನು ಮಾಡಿ ಕಾರ್ಮಿಕ ನಿಯಮದಂತೆ ಕ್ರಮ ತೆಗೆದುಕೊಂಡಿದ್ದಾರೆ ಮತ್ತು 12 ಪ್ರಕರಣಗಳಲ್ಲಿ ನ್ಯಾಯಾಲಯದಲ್ಲಿ ಮೊಕದ್ದಮೆಗಳನ್ನು ಹೂಡಲಾಗಿದೆ.

K.H.B HOUSE IS BAILAMANGAL TALUK.

1083-Sri Shivananda H. Kaujalagi (Bylamangala) : Will the Minister for Housing be pleased to state.

a) When the applications were called from the public for consstruction of houses from Karnataka Housing Board, in Bailahongala Town, Belgaum District.

b) How many applications have been received from public.

c) What is the action taken by Karnataka Housing Board, to construct houses.

d) Even though Government land is available what is the reason for non-construction the houses by Karnataka Housing Board.

e) Either by acquiring private land or Government land whether Government will take action to construct the houses.

Sri GOPINATHA SANDPA (Minister for Housing)